## 23. ಸಾಲ ಮರುಹೊಂದಾಣಿಕೆ : 2021ರ ಮಾರ್ಚ್‌ವರೆಗೂ ಲಭ್ಯ

ಕೋವಿಡ್ 19 ಸಾಂಕ್ರಾಮಿಕದಿಂದಾಗಿ ಆರ್ಥಿಕ ಸಂಕಷ್ಟಕ್ಕೆ ಸಿಲುಕಿರುವ ಕಿರು ಸಣ್ಣ ಮತ್ತು ಮಧ್ಯಮ ಪ್ರಮಾಣದ ಉದ್ದಿಮೆಗಳ (ಎಂಎಸ್ಎಂಇ) ನೆರವಿಗೆ ಆರ್.ಬಿ.ಐ ಬಂದಿದೆ. ಎಂ.ಎಸ್.ಎಂ.ಇ ವಲಯದ ಉದ್ದಿಮೆಗಳಿಗೆ, ಕಂಪನಿಗಳಿಗೆ ಮತ್ತು ವೈಯಕ್ತಿಕ ಸಾಲ ಪಡೆದವರಿಗೆ ಒಂದು ಬಾರಿ ಸಾಲ ಮರುಹೊಂದಾಣಿಕೆ ಮಾಡಿಕೊಳ್ಳುವ ಅವಕಾಶ ಕಲ್ಪಿಸಿದೆ.

2020ರ ಮಾರ್ಚ್ 1ರವರೆಗೆ, ಸಾಲ ಬಾಕಿ ಉಳಿಸಿಕೊಳ್ಳದೇ ಇರುವವರಿಗೆ ಈ ಸೌಲಭ್ಯ ಅನ್ವಯವಾಗಲಿದೆ. ಬ್ಯಾಂಕ್‌ಗಳು ಇಂತಹ ಸಾಲಗಾರರ ಸಾಲ ಮರುಪಾವತಿ ಅವಧಿಯನ್ನು ಹೆಚ್ಚಿಸುವ ಅಥವಾ ಸಾಲದ ಇಎಂಐ ಪಾವತಿಯನ್ನು ವಿಸ್ತರಿಸುವ ತೀರ್ಮಾನ ಕೈಗೊಳ್ಳಬಹುದು. ಇದಕ್ಕಾಗಿ ಶೇ.5 ರಷ್ಟು ಹೆಚ್ಚುವರಿ ನಗದನ್ನು ತೆಗೆದಿರಿಸುವಂತೆ ಬ್ಯಾಂಕ್‌ಗಳಿಗೆ ಆರ್‌ಬಿಐ ತಿಳಿಸಿದೆ.

ಸಾಲ ಮರುಹೊಂದಾಣಿಕೆ ಸೌಲಭ್ಯದಿಂದ ಬಹಳಷ್ಟು ಸಣ್ಣ ಉದ್ದಿಮೆಗಳು ಆರ್ಥಿಕ ಸಂಕಷ್ಟದಿಂದ ಹೊರಬಂದು ವಹಿವಾಟು ಮುಂದುವರಿಸಲು ಸಾಧ್ಯವಾಗಲಿದೆ. ಎಂ.ಎಸ್.ಎಂ.ಇ.ಗಳಿಗೆ ಸಾಲದ ಹರಿವನ್ನು ಖಾತರಿಪಡಿಸುವ ಉದ್ದೇಶದಿಂದ ಅರ್ಹವಾದ ಮತ್ತು ಅಗತ್ಯ ಇರುವ ಕಡೆಗಳಲ್ಲಿ ಸಾಲಗಳ ಮರು ಹೊಂದಾಣಿಕೆ ಮಾಡಬೇಕಾಗಿದೆ ಹಾಗೂ ಈ ಬಿಕ್ಕಟ್ಟಿನ ಸಂದರ್ಭದಲ್ಲಿ ಉದ್ಯಮವು ತನ್ನ ಕಾಲುಗಳ ಮೇಲೆ ನಿಲ್ಲಲು ಸಾಧ್ಯವಾಗುವಂತೆ ಪ್ರಸಕ್ತ ಹಣಕಾಸು ವರ್ಷದಲ್ಲಿ ಕೆಲವು ತಿಂಗಳುಗಳವರೆಗೆ ಸಾಲದ ಕಂತು ಪಾವತಿ ಅವಧಿ ಮುಂದೂಡಿಕೆ ವಿಸ್ತರಿಸುವ ಅವಶ್ಯಕತೆ ಇದೆ ಎಂದು ಕಾಸಿಯಾ ಅಧ್ಯಕ್ಷ ಕೆ.ಬಿ.ಅರಸಪ್ಪ ಅಭಿಪ್ರಾಯಪಟ್ಟಿದ್ದಾರೆ

**ರೆಪೊ ದರದಲ್ಲಿ ಯಥಾಸ್ಥಿತಿ:–** ರೆಪೊ ದರದಲ್ಲಿ ಯಾವುದೇ ಬದಲಾವಣೆ ಮಾಡದಿರಲು ಭಾರತೀಯ ರಿಸರ್ವ್ ಬ್ಯಾಂಕಿನ (ಆರ್.ಬಿ.ಐ) ಹಣಕಾಸು ನೀತಿ ಸಮಿತಿಯ ಸದಸ್ಯರು ಅವಿರೋಧವಾಗಿ ತೀರ್ಮಾನಿಸಿದ್ದಾರೆ.

ರೆಪೊ ದರ ಕಡಿಮೆ ಮಾಡುವುದಕ್ಕೆ ವಿರಾಮ ನೀಡಿರುವ ಕ್ರಮವನ್ನು ಸಮತೋಲನ ಸಾಧಿಸುವ ಯತ್ನ ಎಂದು ವಿಶ್ಲೇಷಿಸಲಾಗುತ್ತಿದೆ. ಹಣದುಬ್ಬರ ದರವು ಹೆಚ್ಚಿನ ಪ್ರಮಾಣದಲ್ಲಿಯೇ ಇರಲಿದ್ದು, 2020–21ನೇ ಸಾಲಿನ ದ್ವಿತೀಯಾರ್ಧದಲ್ಲಿ ಕಡಿಮೆ ಆಗಬಹುದು ಎಂದು ಸಮಿತಿಯು ಅಂದಾಜಿಸಿದೆ. ಹಣದುಬ್ಬರದ ವಿಚಾರದಲ್ಲಿ ಅನಿಶ್ಚಿತತೆ ಇದೆ. ಕೋವಿಡ್–19 ಸಾಂಕ್ರಾಮಿಕದಿಂದಾಗಿ ಅರ್ಥವ್ಯವಸ್ಥೆಯು ತೀರಾ ದುರ್ಬಲ ಸ್ಥಿತಿಯಲ್ಲಿದೆ ಹಾಗಾಗಿ ಬಡ್ಡಿದರಗಳಲ್ಲಿ ಬದಲಾವಣೆ ಮಾಡದಿರಲು ಸಮಿತಿ ತೀರ್ಮಾನಿಸಿತು ಎಂದು ಆರ್‌ಬಿಐ ಗವರ್ನರ್ ಶಕ್ತಿಕಾಂತ ದಾಸ್ ಹೇಳಿದರು.

ಆರ್ಥಿಕ ಪುನಶ್ಚೇತನಕ್ಕಾಗಿ ಅಗತ್ಯ ಇರುವಷ್ಟು ಅವಧಿಯವರೆಗೆ ಬಡ್ಡಿದರ ವಿಚಾರದಲ್ಲಿ ಹೊಂದಾಣಿಕೆಯ ನೀತಿ ಅನುಸರಿಸಲು ಸಮಿತಿಯು ಸಮ್ಮತಿಸಿದೆ. ಸಾಲ ನೀಡುವ ಸಂದರ್ಭದಲ್ಲಿ ನವೋದ್ಯಮಗಳನ್ನು ಆದ್ಯತಾ ವಲಯಗಳು ಎಂದು ಪರಿಗಣಿಸಲು ಆರ್.ಬಿ.ಐ ತೀರ್ಮಾನಿಸಿದೆ. ರಾಷ್ಟ್ರೀಯ ಕೃಷಿ ಮತ್ತು ಗ್ರಾಮೀಣ ಅಭಿವೃದ್ಧಿ ಬ್ಯಾಂಕ್ (ನಬಾರ್ಡ್) ಹಾಗೂ ರಾಷ್ಟ್ರೀಯ ವಸತಿ ಬ್ಯಾಂಕ್ (ಎನ್‌ಎಚ್ ಬಿ)ಗೆ ತಲಾ ರೂ.5 ಸಾವಿರ ಹೆಚ್ಚುವರಿ ನಗದು ವಿತರಿಸಲು ಕೂಡ ಆರ್‌ಬಿಐ ತೀರ್ಮಾನಿಸಿದೆ. ಹಾಲಿ ಆರ್ಥಿಕ ವರ್ಷದಲ್ಲಿ ಜಿಡಿಪಿಯ ನಿಜವಾದ ಬೆಳವಣಿಗೆಯು ನಕಾರಾತ್ಮಕವಾಗಿಯೇ ಇರಲಿದೆ ಎಂಬ ನಿರೀಕ್ಷೆ ಇದೆ ಎಂದು ದಾಸ್ ಹೇಳಿದರು.

ಆಧಾರ:ಪ್ರಜಾವಾಣಿ, ದಿನಾಂಕ:07.08.2020